# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1104(1297)
2. ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 21-12-2018
4. ಉತ್ತರಿಸುವವರು : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ವಕ್ಫ್ ಆಸ್ತಿ ಕಬಳಿಕೆಗೆ ಸಂಬಂಧ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಶ್ರೀ ಅನ್ವರ್ ಮಾನಿಪ್ಪಾಡಿ ಇವರ ವರದಿಯನ್ನು ಸದನದಲ್ಲಿ ಮಂಡಿಸಲು ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಮಾನ್ಯ ಉಚ್ಚನ್ಯಾಯಾಲಯವು ಸರ್ಕಾರಕ್ಕೆ ನಿರ್ದೇಶನ ನೀಡಿದ್ದರೂ ವರದಿಯನ್ನು ಮಂಡಿಸದಿರುವುದೇಕೆ. | ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:19245/2015 ರಲ್ಲಿ ದಿನಾಂಕ:10.09.2015 ರಂದು ನೀಡಿರುವ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸರ್ಕಾರವು ಪುನರ್ ಪರಿಶೀಲನಾ ಅರ್ಜಿ 227/2016 ರನ್ನು ಸಲ್ಲಿಸಲಾಗಿದ್ದು, ಇದರ ತೀರ್ಪನ್ನು ನಿರೀಕ್ಷಿಸಲಾಗುತ್ತಿದೆ.<br>ಉಚ್ಚ ನ್ಯಾಯಾಲಯದ ತೀರ್ಪಿನ ಪ್ರತಿ ಸ್ವೀಕರಿಸಿದ ನಂತರ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು. |
| ಆ | ವಕ್ಫ್ ಮಂಡಳಿಯ ಬಹುಕೋಟಿ ಬೆಲೆಯ ಆಸ್ತಿ ಕಬಳಿಕೆಗೆ ಸಂಬಂಧಿಸಿದ ನೂರಾರು ಕಡತಗಳು ಕಣ್ಮರೆಯಾಗಿ ಅನುಮಾನಕ್ಕೆ ಕಾರಣವಾಗಿರುವ ಬಹುಕೋಟಿ ಹಗರಣದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; | ವಕ್ಫ್ ಮಂಡಳಿಯಲ್ಲಿ ಆಸ್ತಿ ಕಬಳಿಕೆಗೆ ಸಂಬಂಧಿಸಿದಂತೆ ಕಡತಗಳು ನಾಪತ್ತೆಯಾದ ಪ್ರಕರಣಗಳು ಕಂಡುಬಂದಿರುವುದಿಲ್ಲ. |
| ಇ | ಹಾಗಿದ್ದಲ್ಲಿ, ಆಸ್ತಿ ಕಬಳಿಕೆಗೆ ಸಂಬಂಧಿಸಿದ ಕಣ್ಮರೆಯಾದ ನೂರಾರು ಕಡತಗಳನ್ನು ಹುಡುಕಲು ಸರ್ಕಾರ ಏನು ಕ್ರಮ ಕೈಗೊಂಡಿದೆ; | ಅನ್ವಯಿಸುವುದಿಲ್ಲ |
| ಈ | ಕಣ್ಮರೆಯಾದ ಕಡತಗಳು ಯಾವ ಯಾವ ಅಧಿಕಾರಿಗಳ ರಕ್ಷಣೆಯಲ್ಲಿದ್ದವು; ಕಡತಗಳು ಕಣ್ಮರೆಯಾಗಲು ಕಾರಣವಾದ ಅಧಿಕಾರಿಗಳು ಯಾರ್‍ಯಾರು; (ಹೆಸರುಗಳೊಂದಿಗೆ ವಿವರ ನೀಡುವುದು) ಅವರುಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ; (ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಉ | ಆಯೋಗದ ಮಾಜಿ ಅಧ್ಯಕ್ಷರಾದ ಅನ್ವರ್ ಮಾನಪ್ಪಾಡಿಯವರ ವರದಿಯ ಮುಖ್ಯಾಂಶಗಳೇನು; | ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ಪುನರ್ ಪರಿಶೀಲನಾ ಅರ್ಜಿ 227/2016 ಕ್ಕೆ ಸಂಬಂಧಪಟ್ಟಂತೆ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಸ್ವೀಕರಿಸಿದ ನಂತರ ಪರಿಶೀಲಿಸಲಾಗುವುದು. |

| | | |
|---|---|---|
| ಊ | ಕಾನೂನು ಬಾಹಿರವಾಗಿ ಮಾರಾಟವಾದ ಎಷ್ಟು ವಕ್ಫ್ ಆಸ್ತಿಯನ್ನು ಸರ್ಕಾರ ಗುರುತಿಸಿದೆ; ಹಾಗೂ ಸರ್ಕಾರ ಎಷ್ಟು ವಕ್ಫ್ ಅಕ್ರಮ ಆಸ್ತಿಯನ್ನು ಹಿಂದಕ್ಕೆ ಪಡೆದಿದೆ? | ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ವಕ್ಫ್ ಕಾಯಿದೆ 1995 (ತಿದ್ದುಪಡಿ ಕಾಯಿದೆ 2013) ರ ಕಲಂ 52 ರ ಅನ್ವಯ ಒಟ್ಟು 753 ಎಕರೆ 7 ಗುಂಟೆ 620881 ಚದರ ಅಡಿ ವಿಸ್ತೀರ್ಣದ ವಕ್ಫ್ ಆಸ್ತಿಯನ್ನು ಗುರುತಿಸಲಾಗಿದೆ. ಅದರಲ್ಲಿ 21 ಎಕರೆ 12 ಗುಂಟೆ 3969 ಚದರ ಅಡಿ ವಿಸ್ತೀರ್ಣದ ಆಸ್ತಿಯನ್ನು ಮಂಡಳಿಯ ವಶಕ್ಕೆ ಹಿಂಪಡೆಯಲಾಗಿದೆ. |

ಸಂಖ್ಯೆ: MWD 89 LMQ 2018

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ
ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ
ಹಜ್ ಮತ್ತು ವಕ್ಫ್ ಸಚಿವರು